ಕರ್ನಾಟಕ ಸರ್ಕಾರ
# ರಾಷ್ಟ್ರೀಯ ಆರೋಗ್ಯ ಅಭಿಯಾನ
ಕರ್ನಾಟಕ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಬೆಂಗಳೂರು
ಆರೋಗ್ಯ ಸೌಧ, ಮಹಡಿ, ಮಾಗಡಿ ರಸ್ತೆ, ಬೆಂಗಳೂರು-560023

ಸಂಖ್ಯೆ:ಎನ್‌ಹೆಚ್‌ಎಂ/ಡಿಡಿ/ಐಎಂಎಂ/23/2021-22 ದಿನಾಂಕ:29.05.2021

## ಸುತ್ತೋಲೆ

**ವಿಷಯ:** ಕೈಗಾರಿಕಾ ಸಂಸ್ಥೆಗಳಲ್ಲಿ / ಕೈಗಾರಿಕಾ ಸಂಸ್ಥೆಗಳ ಆರೋಗ್ಯ ಸಂಸ್ಥೆಗಳಲ್ಲಿ ಕೋವಿಡ್ ಲಸಿಕಾಕರಣ ಕುರಿತು.

**ಉಲ್ಲೇಖ:**
1. 21.04.2021 ರ ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯದ ಉದಾರೀಕೃತ ಬೆಲೆ ಮತ್ತು ವೇಗವರ್ಧಿತ ರಾಷ್ಟ್ರೀಯ ಕೋವಿಡ್-19 ಲಸಿಕಾಕರಣ ತಂತ್ರ.
2. ತುರ್ತು ಪರಿಸ್ಥಿತಿಯಲ್ಲಿ ನಿರ್ಬಂಧಿತ ಬಳಕೆಗಾಗಿ ಭಾರತದಲ್ಲಿ ಕೋವಿಡ್-19 ಲಸಿಕೆಗಳನ್ನು ಅನುಮೋದಿಸಲು ಮಾರ್ಗದರ್ಶನ US-FDA, EMA, UK-MHRA, PMDA ಜಪಾನ್ ನಿಬಂಧಿತ ಬಳಕೆಗೆ ಈಗಾಗಲೇ ಅನುಮೋದನೆ ನೀಡಲಾಗಿರುವ ಮಾರ್ಗಸೂಚಿ ಅಥವಾ ವಿಶ್ವ ಆರೋಗ್ಯ ಸಂಸ್ಥೆಯ ತುರ್ತು ಬಳಕೆ ಪಟ್ಟಿಯಲ್ಲಿ (EUL) ಪಟ್ಟಿಮಾಡಲಾಗಿರುವ ಸಿ.ಡಿ.ಎಸ್.ಸಿ.ಒ, ಡಿ.ಜಿ.ಹೆಚ್.ಎಸ್-ಭಾರತ ಸರ್ಕಾರ ದಿನಾಂಕ:15.04.2021

*********

ಮೇ 1 ರಿಂದ ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯದಿಂದ ಉದಾರೀಕೃತ ಬೆಲೆ ಮತ್ತು ವೇಗವರ್ಧೀತ ರಾಷ್ಟ್ರೀಯ ಕೋವಿಡ್-19 ಲಸಿಕಾಕರಣ ತಂತ್ರದ ಮಾರ್ಗಸೂಚಿಗಳ ಪ್ರಕಾರ ಆಮದು ಮಾಡಿದ ಮತ್ತು ಬಳಸಲು ಸಿದ್ಧವಾಗಿರುವ ಕೊವಿಡ್ ಲಸಿಕೆಗಳನ್ನು ಸರ್ಕಾರಿ ಆಸ್ಪತ್ರೆಗಳನ್ನು ಹೊರತುಪಡಿಸಿ ಖಾಸಗಿ ಆಸ್ಪತ್ರೆಗಳು/ಕೈಗಾರಿಕಾ ಸಂಸ್ಥೆಗಳು ಸಂಪೂರ್ಣವಾಗಿ ಬಳಸಲು ಅನುಮತಿಸಲಾಗಿದೆ. ಕೋವಿಡ್-19 ಲಸಿಕೆಗಳನ್ನು ಸಂಗ್ರಹಿಸಲು ಮತ್ತು ಭಾರತ ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ಲಸಿಕಾಕರಣ ನಡೆಸಲು ಕರ್ನಾಟಕ ಸರ್ಕಾರ ಖಾಸಗಿ ವಲಯದ ಆಸ್ಪತ್ರೆಗಳು ಮತ್ತು ಕೈಗಾರಿಕಾ ಸಂಸ್ಥೆಗಳನ್ನು ಪ್ರೋತ್ಸಾಹಿಸುತ್ತದೆ. ಇದು ಸಾಧ್ಯವಾದಷ್ಟು ಬೇಗ ರಾಜ್ಯದ ಜನಸಂಖ್ಯೆಯನ್ನು ತಲುಪುವಲ್ಲಿ ಸರ್ಕಾರದ ಪ್ರಯತ್ನಗಳಿಗೆ ಬಹಳ ಪೂರಕವಾಗಿರುತ್ತದೆ.

ಈ ನಿಟ್ಟಿನಲ್ಲಿ ತಯಾರಿಕರಿಂದ ನೇರವಾಗಿ ಲಸಿಕೆಗಳನ್ನು ಖರೀದಿಸುವ ಖಾಸಗಿ ವಲಯದ ಆಸ್ಪತ್ರೆಗಳು ಮತ್ತು ಕೈಗಾರಿಕಾ ಸಂಸ್ಥೆಗಳಿಗೆ ಕಳುಹಿಸುವ ಮಾರ್ಗಸೂಚಿಯನ್ನು ಲಗತ್ತಿಸಿದೆ.

**ಕೈಗಾರಿಕಾ ಸಂಸ್ಥೆಗಳಲ್ಲಿ ಕೋವಿಡ್ ಲಸಿಕಾಕರಣ ಪ್ರಾರಂಭಿಸಲು:**

1. ತಮ್ಮದೇ ಆದ ಆಸ್ಪತ್ರೆಗಳನ್ನು ಹೊಂದಿರುವ ಕೈಗಾರಿಕಾ ಸಂಸ್ಥೆಗಳು ಲಸಿಕೆಗಳನ್ನು ನೇರವಾಗಿ ಖರೀದಿಸಬಹುದು ಮತ್ತು ಲಸಿಕಾ ಖರೀದಿ ವಿವರಗಳನ್ನು ಸಂಬಂಧಪಟ್ಟ ಜಿಲ್ಲೆಯ ಆರ್‌ಸಿಹೆಚ್ ಅಧಿಕಾರಿಗಳಿಗೆ ನೀಡಿ ಲಸಿಕಾಕರಣ ನಡೆಸಲು ಅನುಮೋದನೆ ಪಡೆಯಬಹುದು.
2. ತಮ್ಮದೇ ಆದ ಆಸ್ಪತ್ರೆಗಳನ್ನು ಹೊಂದಿರದ ಕೈಗಾರಿಕಾ ಸಂಸ್ಥೆಗಳು ಲಸಿಕಾಕರಣಕ್ಕೆ ಎಂಪ್ಯಾನಲ್ಡ್ ಆಸ್ಪತ್ರೆಯೊಂದಿಗೆ ಒಪ್ಪಂದ ಮಾಡಿಕೊಳ್ಳಬಹುದು. ಲಸಿಕಾಕರಣ ನಡೆಸಲು ಉದ್ದೇಶಿಸಿರುವ ಕೈಗಾರಿಕಾ ಸಂಸ್ಥೆಯೊಂದಿಗೆ ಒಪ್ಪಂದ ಮಾಡಿಕೊಂಡಿರುವ ಈ ಆಸ್ಪತ್ರೆಗಳು ಲಸಿಕೆ ಖರೀದಿ ವಿವರಗಳನ್ನು ಆರ್‌ಸಿಹೆಚ್ ಅಧಿಕಾರಿಗಳಿಗೆ ಒದಗಿಸಬೇಕು ಮತ್ತು ಅನುಮೋದನೆ ಪಡೆಯಬೇಕು.

ಅರುಂಧತಿ

3. ತಮ್ಮದೇ ಆದ ಆಸ್ಪತ್ರೆ / ಖಾಸಗಿ ಆಸ್ಪತ್ರೆಗಳನ್ನು ಹೊಂದಿರುವ ಕೈಗಾರಿಕಾ ಸಂಸ್ಥೆಗಳು ಹಾಗೂ ಎಂಪ್ಯಾನಲ್ಡ್ ಆಸ್ಪತ್ರೆಗಳು ಕೋವಿನ್ ಪೋರ್ಟಲ್ ಮೂಲಕ ಮಾತ್ರ ಲಸಿಕಾಕರಣ ನಡೆಸಬೇಕು ಮತ್ತು ಕೋವಿಡ್-19 ಲಸಿಕಾಕರಣದ ಎಲ್ಲಾ ಕಾರ್ಯಚರಣೆಯ ಮಾರ್ಗಸೂಚಿಗಳನ್ನು ಅನುಸರಿಸಬೇಕು.
4. ಈ ಸಂಸ್ಥೆಗಳು ಲಸಿಕೆ ಸಾಗಾಣೆ ಸಮಯದಲ್ಲಿ ಲಸಿಕೆ ತಯಾರಕರು ಸೂಚಿಸಿದ ಸೂಕ್ತವಾದ ಶೀತಲ ಸರಪಣಿಯನ್ನು ಖಚಿತಪಡಿಸಿಕೊಳ್ಳಬೇಕು ಮತ್ತು ಆಸ್ಪತ್ರೆಗಳಲ್ಲಿ ಶೇಖರಿಸಿಡಲು ಸಹ ಶೀತಲ ಸರಪಣಿಯನ್ನು ಖಚಿತಪಡಿಸಿಕೊಳ್ಳಬೇಕು.

ಅರುಂಧತಿ

ಅಭಿಯಾನ ನಿರ್ದೇಶಕರು
ರಾಷ್ಟ್ರೀಯ ಆರೋಗ್ಯ ಅಭಿಯಾನ

**ಪ್ರತಿಯನ್ನು**

1. ಮುಖ್ಯ ಆಯುಕ್ತರು, ಬಿಬಿಎಂಪಿ, ಬೆಂಗಳೂರು.
2. ಎಲ್ಲಾ ಜಿಲ್ಲಾ ಜಿಲ್ಲಾಧಿಕಾರಿಗಳು.
3. ಎಲ್ಲಾ ಜಿಲ್ಲಾ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯತ್ ಕಛೇರಿ.
4. ವಿಶೇಷ ಆಯುಕ್ತರು (ಆರೋಗ್ಯ), ಬಿಬಿಎಂಪಿ.
5. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
6. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ. ಬೆಂಗಳೂರು.
7. ವಿಭಾಗೀಯ ಜಂಟಿ ನಿರ್ದೇಶಕರು, ಬಿಬಿಎಂಪಿ ಬೆಂಗಳೂರು,ಬೆಳಗಾವಿ, ಮೈಸೂರು ಮತ್ತು ಗುಲ್ಬರ್ಗ.
8. ಎಲ್ಲಾ ಜಿಲ್ಲೆಯ ಜಿಲ್ಲಾ ಆರೋಗ್ಯ ಮತ್ತ ಕುಟುಂಬ ಕಲ್ಯಾಣ ಅಧಿಕಾರಿಗಳು.
9. ಮುಖ್ಯ ಆರೋಗ್ಯಾಧಿಕಾರಿಗಳು (ಸಾರ್ವಜನಿಕ ಆರೋಗ್ಯ), ಬಿಬಿಎಂಪಿ.
10. ಎಲ್ಲಾ ಜಿಲ್ಲೆಯ ಆರ್.ಸಿ.ಹೆಚ್ ಅಧಿಕಾರಿಗಳು,
11. ಲಸಿಕಾಧಿಕಾರಿಗಳು (ಬಿ.ಬಿ.ಎಂ.ಪಿ)
12. ಅಧ್ಯಕ್ಷರು, (PHANA)
13. ಅಧ್ಯಕ್ಷರು, ಭಾರತೀಯ ವೈದ್ಯಕೀಯ ಸಂಘ.

**ಮಾಹಿತಿಗಾಗಿ:**

1. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ.
2. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ.
3. ಸನ್ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು.
4. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು.
5. ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ವ್ಯದ್ಯಕೀಯ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
6. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
7. ಅಪರ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.

8. ಯೋಜನಾ ನಿರ್ದೇಶಕರು (ಆರ್.ಸಿ.ಹೆಚ್), ಆರೋಗ್ಯ ಮತ್ತುಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
9. ಉಪ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
10. ಉಪ ನಿರ್ದೇಶಕರು (ಲಸಿಕೆ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
11. ಕಛೇರಿ ಪ್ರತಿ